**2 ನೇ ಅಪರ ನ್ಯಾಯಿಕ ದಂಡಾಧಿಕಾರಿ ಮತ್ತು ಜೆಎಂಎಫ್‌ಸಿ ನ್ಯಾಯಾಲಯ ಮಾಗಡಿ**
**ಕ್ರಿಮಿನಲ್ ಪ್ರಕರಣ ಸಂಖ್ಯೆ - 838/2019**
**ಚಾಸಾ - 04 / ಪ್ರಾಸಾ - 04**

| | |
|---|---|
| ಹೆಸರು | **ಸುರೇಶ್** |
| ತಂದೆಯ ಹೆಸರು | **ಲೇಟ್ ಗಂಗನರಸಯ್ಯ** |
| ವಯಸ್ಸು | **42** |
| ಉದ್ಯೋಗ | **ಚಾಲಕ** |
| ವಿಳಾಸ | **ವರದೇನಹಳ್ಳಿ** |

**ದಿನಾಂಕಃ 08-02-2024 ರಂದು** ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆ** - **ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದ** -

ನನಗೆ ಚಾಸಾ-1 ಮತ್ತು 2 ರವರು ಗೊತ್ತು. ನನಗೆ ನ್ಯಾಯಾಲಯದ ಮಂದೆ ಇರುವ ಆರೋಪಿಗಳು ಗೊತ್ತು. ನನಗೆ ಈ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇಲ್ಲ. ನಾನು ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಪೋಲೀಸರಿಗೆ ಹೇಳಿಕೆಯನ್ನು ನೀಡಿರುವುದಿಲ್ಲ.

**ಈ ಹಂತದಲ್ಲಿ ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ, ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು, ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕರ ಮನವಿಯನ್ನು ಪುರಸ್ಕರಿಸಿ, ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು.**

**ಪಾಟೀ ಸವಾಲು ಃ- ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದ ಃ-**

ಸಾಕ್ಷಿಗೆ ತಾನು ನೀಡಿರುವ ಹೇಳಿಕೆಯ ಭಾಗವಾದ " ದಿನಾಂಕಃ 28-04-2015 ರಂದು ರಾತ್ರಿ ಸುಮಾರು 10.00 ಗಂಟೆಯ ----------------- ಕ್ರಮ ಜರುಗಿಸಬೇಕೆಂದು ಕೋರುತ್ತೇನೆ " ಓದಿ ತಿಳಿಸಲಾಯಿತು. ಸಾಕ್ಷಿಯು ತಾನು ನೀಡಿರುವ ಹೇಳಿಕೆಯನ್ನು ಅಲ್ಲಗಳೆದಿರುತ್ತಾರೆ. ಸದರಿ ಹೇಳಿಕೆಯನ್ನು

ನಿಪಿ-3 ಎಂದು ಗುರುತಿಸಲಾಯಿತು. ಆರೋಪಿಗಳು ನಿಮ್ಮ ಊರಿನವರು ಎಂದರೆ ಸಾಕ್ಷಿಯು ಹೌದು ಎನ್ನುತ್ತಾರೆ. ಆರೋಪಿಗಳು ನಿಮ್ಮ ಊರಿನವರಾದ ಕಾರಣದಿಂದ ಸದರಿ ಪ್ರಕರಣದ ಬಗ್ಗೆ ಎಲ್ಲಾ ಮಾಹಿತಿ ತಿಳಿದಿದ್ದರೂ ಸಹ ಆರೋಪಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ಹೇಳುತ್ತಿದ್ದೀರಾ ಎಂದರೆ ಸಾಕ್ಷಿಯು ಸರಿಯಲ್ಲ ಎನ್ನುತ್ತಾರೆ.

**ಪಾಟೀ ಸವಾಲು** ಃ- **ಆರೋಪಿಗಳ** ಪರ **ಶ್ರೀ. ಎಂ.ಎಂ ,** ವಕೀಲರಿಂದ ಃ-

ಆರೋಪಿಗಳ ಪರವಾಗಿ ಏನು ಪಾಟೀ ಸವಾಲು ಇರುವುದಿಲ್ಲವೆಂದು ತಿಳಿಸಿರುತ್ತಾರೆ.

**ಓ. ಹೇ. ಕೇ. ಸ. ಇ. ಎ. ಒಪ್ಪಿರುತ್ತಾರೆ,**

**2 ನೇ ಅ. ನ್ಯಾ. ದಂ. ಮತ್ತು ಜೆಎಂಎಫ್‌ಸಿ,**
**ಮಾಗಡಿ.**